ಪ-330 - (36)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಟಿ. ಶ್ರೀಕಂಠೇಗೌಡ, ಶ್ರೀ ಮರಿತಿಬ್ಬೇಗೌಡ, ಶ್ರೀ ಆಯನೂರು ಮಂಜುನಾಥ್ ಹಾಗೂ ಡಾ: ತಳವಾರ್ ಸಾಬಣ್ಣ ಅವರುಗಳು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

2015ರ ಮುಂಚೆ ಖಾಲಿಯಾಗಿರುವ ಅನುದಾನಿತ ಪದವಿ ಕಾಲೇಜುಗಳ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆಯು ಇ-ಪೋರ್ಟಲ್ 'ಕೋವಿಡ್-19' ತಾಂತ್ರಿಕ ಮತ್ತು ಆಡಳಿತಾತ್ಮಕ ಕಾರಣದಿಂದ ನೇಮಕಾತಿ ನೆನಗುದಿಗೆ ಬಿದ್ದಿರುವ ಕಾರಣ ಅಭ್ಯರ್ಥಿಗಳ ವಯೋಮಿತಿ ಮೀರಿ ಸಂಕಷ್ಟ ಎದುರಾಗಿದೆ. ಅಂತಹ ಅಭ್ಯರ್ಥಿಗಳ ಹಿತದೃಷ್ಟಿಯಿಂದ 2 ವರ್ಷಗಳ ಸಡಿಲಿಕೆ ಮಾಡಿ ನೇಮಕಾತಿ ಪ್ರಕ್ರಿಯೆಗೆ ತುರ್ತಾಗಿ ಚಾಲನೆ ನೀಡಿ ಮುಂದೆ ವಯೋಮಿತಿ ಮೀರುತ್ತಿರುವ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸುವ ಕುರಿತು.

**ಉತ್ತರ**

ಸರ್ಕಾರದ ಪತ್ರ ಸಂಖ್ಯೆ:ಇಡಿ 240 ಯುಪಿಸಿ 2014, ದಿನಾಂಕ:01-09-2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31-12-2015 ರೊಳಗೆ ವಿವಿಧ ಕಾರಣಗಳಿಂದ ತೆರವಾಗಿರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡಲು ಕೆಲವೊಂದು ಷರತ್ತಿಗೊಳಪಡಿಸಿ ಸರ್ಕಾರದ ಅನುಮತಿ ನೀಡಲಾಗಿರುತ್ತದೆ. ಆದರೆ, ಕೋವಿಡ್-19ರ ಹಿನ್ನಲೆಯಲ್ಲಿ ಆರ್ಥಿಕ ಮಿತವ್ಯಯ ಆದೇಶ ಜಾರಿಯಾದ ಕಾರಣ ಖಾಲಿ ಹುದ್ದೆ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿತ್ತು.

ನೇಮಕಾತಿ ಅನುಮೋದನೆಯ ಅಂತಿಮ ಹಂತದಲ್ಲಿ ಬಾಕಿ ಇದ್ದ ಒಟ್ಟು 340 ಬೋಧಕರ ಹುದ್ದೆಗಳನ್ನು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಈಗಾಗಲೇ ನೇಮಕಾತಿಗೆ ಸರ್ಕಾರದ ಅನುಮೋದನೆ ನೀಡಲಾಗಿದೆ. ಮುಂದುವರೆದು, ಸರ್ಕಾರ ಮತ್ತು ಇಲಾಖೆಯ ವಿವಿಧ ಹಂತಗಳಲ್ಲಿ ಬಾಕಿ ಇರುವ ಒಟ್ಟು 933 ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯ ಅನುಮೋದನೆ ಕೋರಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ:ಇಡಿ 49 ಯುಪಿಸಿ 2018, ದಿನಾಂಕ:20-06-2018 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬೋಧಕರ ನೇಮಕಾತಿ ನಿಯಮಗಳಲ್ಲಿ ಅರ್ಜಿ ಸಲ್ಲಿಸುವ ಅರ್ಹ ಅಭ್ಯರ್ಥಿಗಳಿಗೆ ಅಂದರೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ 40 ವರ್ಷ, ಇತರೆ ಹಿಂದುಳಿದ ಅಭ್ಯರ್ಥಿಗಳಿಗೆ 43 ವರ್ಷ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1ರ ಅಭ್ಯರ್ಥಿಗಳಿಗೆ 45 ವರ್ಷಗಳ ಗರಿಷ್ಠ ವಯೋಮಿತಿಯನ್ನು ನಿಗಧಿಪಡಿಸಲಾಗಿದ್ದು, ಸೇರ್ಪಡೆ ಆದೇಶ ಸಂಖ್ಯೆ:ಇಡಿ 87 ಯುಪಿಸಿ 2016, ದಿನಾಂಕ:13-12-2018 ರನ್ವಯ ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣಕಾಲಿಕ ಬೋಧನಾ ಅನುಭವ ಹೊಂದಿರುವ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯನ್ನು ನಿಗಧಿಪಡಿಸುವುದರೊಂದಿಗೆ ಅವರು ಬೋಧನಾ ಅನುಭವ ಹೊಂದಿರುವ ಸೇವಾ ಅವಧಿ ಅಥವಾ 5 ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಅವಧಿಗೆ ಗರಿಷ್ಠ ವಯೋಮಿತಿಯಲ್ಲಿ ವಿನಾಯಿತಿ ನೀಡಲಾಗುತ್ತಿದೆ.

ಈಗಾಗಲೇ ಅಭ್ಯರ್ಥಿಗಳ ನೇರ ನೇಮಕಾತಿಗೆ ಗರಿಷ್ಠ ವಯೋಮಿತಿ ನಿಗಧಿಪಡಿಸಿರುವುದರಿಂದ, 02 ವರ್ಷಗಳ ವಯೋಮಿತಿ ಸಡಿಲಿಕೆಯ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

**ಇಡಿ 155 ಯುಪಿಸಿ 2021**

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ